**1 ನೇ ಹೆಚ್ಚುವರಿ ಸತ್ರ ಮತ್ತು ವಿಶೇಷ ನ್ಯಾಯಾಲಯ, ಚಿಕ್ಕಮಗಳೂರು**

**ಸ್ಪೆಷಲ್ ಮೊಕದ್ದಮೆ ನಂಃ 59/2023**

| | | |
|---|---|---|
| ಸಾಕ್ಷಿದಾರರ ಹೆಸರು | - ಚಂದ್ರಪ್ಪ | ಪಿಡಬ್ಲ್ಯೂ- 04 |
| ತಂದೆಯ ಹೆಸರು | - ಚಿಕ್ಕಕರಿಯಪ್ಪ | ಸಿಡಬ್ಲ್ಯೂ -04 |
| ವಯಸ್ಸು | - 70 ವರ್ಷ | |
| ಉದ್ಯೋಗ | - ವ್ಯವಸಾಯ | |
| ವಾಸ ಸ್ಥಳ | - ನಂದಿ ಗ್ರಾಮ | |

ದಿನಾಂಕಃ 16-02-2026 ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ : ವಿಶೇಷ ಸರ್ಕಾರಿ ಅಭಿಯೋಜಕರಿಂದ-

1. ನ್ಯಾಯಾಲಯದಲ್ಲಿ ಹಾಜರಿರುವ ಆರೋಪಿ ಗೊತ್ತು. ಫ್ರಾಸಾ.1, ಗೊತ್ತು. ಈ ಪ್ರಕರಣದ ಯಾವುದೇ ಸಾಕ್ಷಿದಾರರು ನನಗೆ ಗೊತ್ತಿಲ್ಲ.

2. ಆರೋಪಿಯಿಂದ ಫ್ರಾಸಾ.2 ರವರಿಗೆ ಏನು ತೊಂದರೆಯಾಗಿದೆ ಎಂದು ನನಗೆ ಗೊತ್ತಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ಪೊಲೀಸರು ನನ್ನನ್ನು ವಿಚಾರಿಸಿಲ್ಲ ಮತ್ತು ನಾನು ಅವರಿಗೆ ಯಾವುದೇ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅಭಿಯೋಜಕರು ಅನುಮತಿ ಕೇಳಿರುತ್ತಾರೆ ದಾಖಲೆಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು)

ಪಾಟೀ ಸವಾಲುಃ ವಿಶೇಷ ಸರ್ಕಾರಿ ಅಭಿಯೋಜಕರಿಂದಃ-

3. ದಿಃ 08-01-2023 ರಂದು ಮಧ್ಯಾಹ್ನ 12 ಗಂಟೆಗೆ ನಮ್ಮ ಮಾವ ಹನುಮಂತಪ್ಪರವರು ನನಗೆ ಕೊಟ್ಟಿರುವ ಅವರ ಜಮೀನಿನಲ್ಲಿ

ಕೆಲಸ ಮಾಡುತ್ತಿದ್ದು ಆಗ ಫ್ರಾಸಾ.3 ರವರು ಅವರ ಎಮ್ಮೆಗಳನ್ನು ಮೇಯಿಸುತ್ತಿದ್ದರು ಎಂದರೆ ಸರಿಯಲ್ಲ. ಎಮ್ಮೆ ಮೇಯಿಸುವ ಸರದಿ ಪೂಜಾರಿ ಚಂದ್ರಪ್ಪರವರಿಗೆ ಇದ್ದು ಅವರ ಪರವಾಗಿ ಫ್ರಾಸಾ.2 ರವರು ಎಮ್ಮೆ ಮೇಯಿಸಲು ಸಿದ್ದರ ಓಣಿ ಹತ್ತಿರ ಹೋದಾಗ ಅವರಿಗೆ ಬಾಯಾರಿಕೆ ಆಗಿದ್ದರಿಂದ ಎಮ್ಮೆಗಳನ್ನು ಬಿಟ್ಟು ಮಧ್ಯಾಹ್ನ 12 ಗಂಟೆ ಸುಮಾರಿಗೆ ಮಿಟಲಿ ಮರದಡಿಯಲ್ಲಿ ನೀರು ಕುಡಿಯುತ್ತಿದ್ದಾಗ ಆಗ ಫ್ರಾಸಾ.2 ರವರು ಎಮ್ಮೆ ಮೇಯಿಸಲು ಸಿದ್ದರ ಓಣಿ ಹತ್ತಿರ ಹೋದಾಗ ಅವರಿಗೆ ಬಾಯಾರಿಕೆ ಆಗಿದ್ದರಿಂದ ಎಮ್ಮೆಗಳನ್ನು ಬಿಟ್ಟು ಮಧ್ಯಾಹ್ನ 12 ಗಂಟೆ ಸುಮಾರಿಗೆ ಮಿಟಲಿ ಮರದಡಿಯಲ್ಲಿ ನೀರು ಕುಡಿಯುತ್ತಿದ್ದಾಗ 1ನೇ ಆರೋಪಿಯಾದ ಅರುಣಕುಮಾರ ಅಲ್ಲಿಗೆ ಹೋಗಿ ಏಕಾಏಕಿ ದೊಣ್ಣೆಯಿಂದ ಫ್ರಾಸಾ.2 ರವರ ಎಡಗಾಲು, ಎಡಗೈ ಮತ್ತು ಸೊಂಟಕ್ಕೆ ಬಲವಾಗಿ ಹೊಡೆದು ಅವಾಚ್ಯ ಶಬ್ಧಗಳಿಂದ ಬೈದನು ಎಂದರೆ ಸರಿಯಲ್ಲ. ಆತನ ಜೊತೆಗೆ ಹೋಗಿದ್ದ ಹೇಮಂತ್ ಸಹ ಫ್ರಾಸಾ.2 ರವರ ಕೈಗೆ ಕಲ್ಲಿನಿಂದ ಹೊಡೆದು ಅವಾಚ್ಯ ಶಬ್ಧಗಳಿಂದ ನಿಂದಿಸಿದನು ಎಂದರೆ ಸರಿಯಲ್ಲ. ಆಗ ಫ್ರಾಸಾ.2 ರವರು ಯಾಕಪ್ಪ ಈ ರೀತಿ ಹೊಡೆಯುತ್ತೀರಾ ಎಂದು ಕೇಳಿದಾಗ, ಹೊಲೆಯ ಮಾದಿಗ ಸೂಳೆ ಮಗನೇ, ನಿನ್ನ ತಾಯಿನಾಡ ನಿನಗೆ ಜ್ಞಾನ ಇಲ್ಲವೇನೋ, ನಿನ್ನನ್ನು ಕೊಲೆ ಮಾಡುತ್ತೇನೆ ಮತ್ತು ನಿನ್ನ ಕುಟುಂಬದವರನ್ನು ಯಾರನ್ನು ಕೂಡ ಉಳಿಸುವುದಿಲ್ಲ ಎಂದು ಆರೋಪಿತರು ಹೇಳಿದ್ದಾರೆ ಎಂದರೆ ಸರಿಯಲ್ಲ. ನನ್ನ ಜಮೀನಿನಲ್ಲಿರುವ ಜೋಳದ ಗುಡ್ಡೆಗೆ ಎಮ್ಮೆಗಳನ್ನು ಬಿಟ್ಟಿದ್ದೀಯಾ ಎಂದು

ಆರೋಪಿ ಫ್ರಾಸಾ.2 ರವರಿಗೆ ಬೈದಿದ್ದಾನೆ ಎಂದರೆ ಸರಿಯಲ್ಲ. ಆಗ ಫ್ರಾಸಾ.2 ರವರು ಇಲ್ಲಪ್ಪ ನಿನ್ನ ಜೋಳದ ಗುಡ್ಡೆಗೆ ಎಮ್ಮೆಗಳನ್ನು ಬಿಟ್ಟಿಲ್ಲ ಎಂದು ಹೇಳಿದಾಗಲೂ ಸಹ ಆರೋಪಿ ಫ್ರಾಸಾ.2 ರವರಿಗೆ ಪುನಃ ಹಲ್ಲೆ ಮಾಡಿ ದೊಣ್ಣೆಯನ್ನು ಮರದಡಿ ಬಿಸಾಡಿ ಹೋಗಿದ್ದರು ಎಂದರೆ ಸರಿಯಲ್ಲ. ನಂತರ ನಾನು ಮತ್ತು ಫ್ರಾಸಾ.3 ರವರು ಅಲ್ಲಿಂದ ಹೊರಟೆವು ಎಂದರೆ ಸರಿಯಲ್ಲ.

4. ನಂತರ ವಿಚಾರಿಸಲಾಗಿ ಫ್ರಾಸಾ.1 ರವರು ಜಮೀನಿನಲ್ಲಿ ಕೆಲಸವನ್ನು ಮುಗಿಸಿಕೊಂಡು ಸಂಜೆ 6 ಗಂಟೆಗೆ ನಮ್ಮ ಬೀದಿಯ ಹತ್ತಿರ ಬರುವಾಗ ನಮ್ಮ ಗ್ರಾಮದ ವಾಸಿಯಾದ ಚಾಸಾ.7 ರೇಖಾರವರು ಆತನಿಗೆ ಫ್ರಾಸಾ.2 ರವರು ಹನುಮಂತಪ್ಪರವರ ಜಮೀನಿನಲ್ಲಿರುವ ಮರದಡಿಯಲ್ಲಿ ಬಿದ್ದಿರುವವನ್ನು ತಿಳಿಸಿದ್ದ ಮೇರೆಗೆ ಫ್ರಾಸಾ.1 ರವರು ಚಾಸಾ.8 ರವರೊಂದಿಗೆ ಬೈಕಿನಲ್ಲಿ ಅಲ್ಲಿಗೆ ಹೋಗಿ ಫ್ರಾಸಾ.2 ರವರನ್ನು ಮನೆಗೆ ಕರೆದುಕೊಂಡು ಬಂದು ಮಲಗಿಸಿದ್ದಾಗಿ ಮಾರನೆ ದಿನ ಫ್ರಾಸಾ.2 ರವರಿಗೆ ನೋವು ಹೆಚ್ಚಾಗಿದ್ದರಿಂದ ಅವರನ್ನು ತರೀಕೆರೆ ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಹೋಗಿ ಚಿಕಿತ್ಸೆ ಕೊಡಿಸಿದ್ದಾಗಿ ತಿಳಿಯಿತು ಎಂದರೆ ಸರಿಯಲ್ಲ.

5. ದಿಃ 11-01-2023 ರಂದು ಪೊಲೀಸರು ನನ್ನನ್ನು ವಿಚಾರಿಸಿದ್ದಾರೆ ಎಂದರೆ ಸರಿಯಲ್ಲ. ಆಗ ನಾನು ಅವರಿಗೆ ಮೇಲಿನ ವಿಚಾರಗಳನ್ನು ತಿಳಿಸಿ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸದರಿ ಸಾಕ್ಷಿಯ ಹೇಳಿಕೆಯನ್ನು ನಿಪಿ.8 ಎಂದು ಗುರುತಿಸಲಾಯಿತು.

6. ಘಟನೆಯ ಬಗ್ಗೆ ಮಾಹಿತಿ ಇದ್ದು ಆ ಬಗ್ಗೆ ಪೊಲೀಸರಿಗೆ ನಿಪಿ.8 ರಂತೆ ಹೇಳಿಕೆಯನ್ನು ನೀಡಿದ್ದರೂ ಸಹ ಈಗ ಆರೋಪಿಯೊಂದಿಗೆ ಶಾಮೀಲಾಗಿ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೀರಿ ಎಂದರೆ ಸರಿಯಲ್ಲ.

ಪಾಟೀ ಸವಾಲು: ಆರೋಪಿಯ ಪರ ವಕೀಲರು ಸಾಕ್ಷಿಯ ಪಾಟೀ ಸವಾಲು ಇಲ್ಲವೆಂದು ನುಡಿದಿರುತ್ತಾರೆ.

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸ.ಇ.ಎ.ಒ.

ಸಹಿ/-
(ಭಾನುಮತಿ ಬಿ.ಸಿ)
1 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿಕ್ಕಮಗಳೂರು.

ಸಾಕ್ಷಿಯ ಸಹಿ